**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ರವರ ನ್ಯಾಯಾಲಯ**
**ತಿಪಟೂರು**

**ಸಿ.ಸಿ ನಂ. 748/2017**

ಚಾಸಾಃ 7
ಫ್ರಾಸಾಃ 5

**ದಿನಾಂಕಃ 27-11-2023 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು | ಃ | ಮಧುಕುಮಾರ್ |
| ತಂದೆಯ/ಗಂಡನ ಹೆಸರು | ಃ | ರಾಜಪ್ಪ |
| ವಯಸ್ಸು | ಃ | 35 ವರ್ಷ |
| ಉದ್ಯೋಗ | ಃ | ಚಾಲಕ |
| ವಾಸ ಸ್ಥಳ | ಃ | ತುಮಕೂರು |

**ಮುಖ್ಯ ವಿಚಾರಣೆ ಎಪಿಪಿಯವರಿಂದಃ**

1 ನೇ ಆರೋಪಿ ನನಗೆ ಗೊತ್ತು ಅವರು ನನ್ನಿಂದ ಇಂಡಿಕಾ ಸಂಖ್ಯೆಃ ಕೆ ಎ-02-ಡಿ-3967 ಕಾರನ್ನು ಮಾರಾಟ ಮಾಡಿರುತ್ತೇನೆ. ಈ ಕೇಸಿನ ಬಗ್ಗೆ ಮಾಹಿತಿ ಯಾವುದು ಇಲ್ಲ. ಈ ದಿನ ನಾನು ಸಾಕ್ಷಿ ಕೊಡಬೇಕೆಂದು ಪೊಲೀಸ್ ಠಾಣೆಯಿಂದ ಕರೆ ಬಂದಿರುವುದರಿಂದ ನಾನು ನ್ಯಾಯಾಲಯಕ್ಕೆ ಬಂದಿರುತ್ತೇನೆ. ನಾನು ಈ ವಿಚಾರವಾಗಿ ಪೋಲೀಸರಿಗೆ ಯಾವುದೇ ಹೇಳಿಕೆಯನ್ನು ಕೊಟ್ಟಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸಸಅ ರವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವ್ಯತಿರಿಕ್ತವಾಗಿ ಸಾಕ್ಷ್ಯ ನುಡಿದಿರುವ ಕಾರಣ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

ಪಾಟೀ ಸವಾಲು ಸರ್ಕಾರಿ ಅಭಿಯೋಜಕರವರಿಂದಃ

**1** ನೇ ಆರೋಪಿಯವರು ನನ್ನಿಂದ ಕೆ ಎ-**02**-ಡಿ-**3967** ಇಂಡಿಕಾ ಕಾರನ್ನು ಖರೀದಿ ಮಾಡಿರುತ್ತಾರೆ. ಖರೀದಿ ಮಾಡಿದ ನಂತರ ಆರೋಪಿಗಳು ಸದರಿ ಕಾರನ್ನು ತಿಪಟೂರು ತಾಲ್ಲೂಕು ಕೆ ಬಿ ಕ್ರಾಸ್ ನಲ್ಲಿ ಪ್ರಯಾಣಿಕರನ್ನು ಡ್ರಾಪ್ ಮಾಡುವುದಾಗಿ ಹೇಳಿ ಹತ್ತಿಸಿಕೊಂಡು ಪ್ರಯಾಣಿಕರಿಗೆ ಚಾಕು ತೋರಿಸಿ, ಹೆದರಿಸಿ, ಅವರಿಂದ ಹಣ ಒಡವೆಗಳನ್ನು, ಮೊಬೈಲ್ ಗಳನ್ನು ಕಿತ್ತುಕೊಂಡು ಸುಲಿಗೆ

ಮಾಡುತ್ತಾರೆ ಎಂದು ನಾನು ದಿನಾಂಕಃ **07.04.2017** ರಂದು ಪೋಲೀಸರಿಗೆ ಹೇಳಿಕೆ ಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ನಿರಾಕರಿಸಿದ ಹೇಳಿಕೆಯನ್ನು ನಿಪಿ-3 ಎಂದು ಗುರುತಿಸಲಾಯಿತು.

ಮರು ವಿಚಾರಣೆ - ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕರಿಸಿ ಓದಿ ಹೇಳಿ, ಕೇಳಿದಾಗ ಸರಿ ಇದೆ ಎಂದು ಒಪ್ಪಿರುತ್ತಾರೆ.)

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ
ತಿಪಟೂರು.